




ದಿನಾಂಕ: 02-06-2023 ರಂದು ಕರ್ನಾಟಕ ವಿಧಾನಪರಿಷತ್ತಿನ ಮಾನ್ಯ ಸಭಾಪತಿಯವರಾದ ಶ್ರೀ ಬಸವರಾಜ ಎಸ್ ಹೊರಟ್ಟಿ ಅವರು ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಚಿಕ್ಕೂಡ ಗ್ರಾಮಕ್ಕೆ ಆಗಮಿಸಿ ಗ್ರಾಮ ಪ್ರಗತಿಪಥದತ್ತ ಸಾಗುತಿರುವುದರ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು. ಅವರು ಸ್ಥಳೀಯ ಪ್ರಗತಿಪರ ರೈತ ಮುಖಂಡ ಪರಮೇಶ್ವರ ಮಳ್ಳೂರ ಅವರ ಮನೆಗೆ ಭೇಟಿ ನೀಡಿದಾಗ ಅವರ ಅಪಾರ ಅಭಿಮಾನಿಗಳಿಂದ ಗೌರವ ಸತ್ಕಾರ ಸ್ವೀಕರಿಸಿದರು.







ನಂತರ ಚಿಕ್ಕೊಡದಲ್ಲಿರುವ ಸರಕಾರಿ ಪ್ರೌಢ ಶಾಲೆ ಹಾಗೂ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ಸಂದರ್ಶನ ನೀಡಿ ಮಕ್ಕಳೊಂದಿಗೆ ಸಂವಾದ ಮಾಡಿದರು. ಮಾರ್ಚ 2023ರ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 596 ಅಂಕಗಳನ್ನು ಗಳಿಸಿ ಪ್ರಥಮ ಸ್ಥಾನ ಪಡೆದ ಕು.ಕಾವೇರಿ ಮುತ್ತಪ್ಪ ಸನದಿ ವಿದ್ಯಾರ್ಥಿಯನ್ನು ಸನ್ಮಾನಿಸಿ ಶುಭ ಹಾರೈಸಿದರು.